Jalamrutha
2019 YEAR OF WATER

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ

ಸ್ವಚ್ಛಮೇವ ಜಯತೇ SWACHHA MEVA JAYATE

## ಸ್ವಚ್ಛ ಸುಂದರ ಪರಿಸರಕ್ಕಾಗಿ ಮಾಹಿತಿ ಶಿಕ್ಷಣ ಸಂವಹನ ಚಟುವಟಿಕೆಗಳು

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿ ನೀರು ಮತ್ತು ನೈರ್ಮಲ್ಯ ಸುಸ್ಥಿರತೆಯನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ವಿವಿಧ ಹಂತದ ಯೋಜನಾ ಅನುಷ್ಠಾನ ಅಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು ಮತ್ತು ಸಮಾಲೋಚಕರಿಗೆ ಹಲವಾರು ತರಬೇತಿ ಕಾರ್ಯಾಗಾರಗಳನ್ನು ಆಯೋಜಿಸಲಾಗಿತ್ತು.



ಪ್ರತಿಯೊಂದು ಗ್ರಾಮದಲ್ಲಿ ಬಯಲು ಬಹಿರ್ದೆಸೆ ಮುಕ್ತ ಸುಸ್ಥಿರತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಕಾರ್ಯತಂತ್ರ, ಕ್ರಿಯಾ ಯೋಜನೆ ತಯಾರಿಸುವ ಬಗ್ಗೆ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಹಂತದ ಆಯ್ದ ಅನುಷ್ಠಾನ ಅಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು ಮತ್ತು ಎಸ್.ಬಿ.ಎಂ-ಜಿ ಜಿಲ್ಲಾ ಸಮಾಲೋಚಕರುಗಳಿಗೆ ಕೋಲಾರ ಜಿಲ್ಲೆಯಲ್ಲಿ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ಎರಡು ದಿನಗಳ ಕಾಲ ನಡೆದ ಈ ತರಬೇತಿ ಕಾರ್ಯಾಗಾರದಲ್ಲಿ ೬೦ ಜನ ಶಿಬಿರಾರ್ಥಿಗಳು ಭಾಗವಹಿಸಿದ್ದರು. ಶೌಚಾಲಯ ಬಳಕೆ, ವಿವಿಧ ಶೌಚಾಲಯಗಳ ತಂತ್ರಜ್ಞಾನ ಅಳವಡಿಕೆ, ರೆಟ್ರೋಫಿಟಿಂಗ್, ನೈರ್ಮಲ್ಯ ಅಭ್ಯಾಸಗಳು, ಸಾಂಸ್ಥಿಕ ಸಂಸ್ಥೆಗಳಲ್ಲಿ ನೈರ್ಮಲ್ಯ ಅಭ್ಯಾಸಗಳು ಸೇರಿದಂತೆ ಇತ್ಯಾದಿಗಳ ಬಗ್ಗೆ ವಿವಿಧ ಕ್ಷೇತ್ರಗಳಲ್ಲಿ ವಿಷಯ ತಜ್ಞರು ಪ್ರಾತ್ಯಕ್ಷಿಕೆ ಮೂಲಕ ವಿಷಯ ಮಂಡನೆ ಮಾಡಿದರು.

**ಸ್ವಚ್ಛ ಭಾರತ್ ಮಿಷನ್** (ಗ್ರಾ) ಯೋಜನೆಯಡಿ ಜಿಲ್ಲಾ ನೆರವು ಘಟಕಕ್ಕೆ ಹೊಸದಾಗಿ ಆಯ್ಕೆಯಾದ ಜಿಲ್ಲಾ ಎಸ್.ಬಿ.ಎಂ ಸಮಾಲೋಚಕರು ಮತ್ತು ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಗೆ ಆಯ್ಕೆಯಾದ ರಾಜ್ಯಮಟ್ಟದ ಸಮಲೋಚಕರಿಗೆ ಯೋಜನೆಯ ಅನುಷ್ಟಾನ ಹಾಗೂ ಬಯಲು ಬಹಿರ್ದೆಸೆ ಮುಕ್ತ ಸುಸ್ಥಿರತೆ ಮತ್ತು ಸುಸ್ಥಿರತೆಯ ಮುಂದುವರೆದ (ODF-S and ODF-Plus) ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಕುರಿತು ಉಡುಪಿ ಜಿಲ್ಲೆಯ ಬ್ರಹ್ಮಾವರದಲ್ಲಿ ತರಬೇತಿ ಮತ್ತು ಕ್ಷೇತ್ರ ಅಧ್ಯಯನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.





ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯ, ಭಾರತ ಸರ್ಕಾರ ಹಾಗೂ ಯುನಿಸೆಫ್ ಇವರ ಸಹಯೋಗದಲ್ಲಿ ಶುದ್ಧ ನೀರು ಮತ್ತು ಸ್ವಚ್ಛ ಗ್ರಾಮ (Sujal and Swachh Gaon) ಕುರಿತು ತರಬೇತಿ ಕಾರ್ಯಾಗಾರವನ್ನು ಮೈಸೂರಿನ ಸ್ವಾಮಿ ವಿವೇಕಾನಂದ ಇನ್ಸ್ಟಿಟ್ಯೂಟ್ ಫಾರ್ ಲೀಡರ್ಶಿಪ್ ಡೆವಲಪ್ಮೆಂಟ್ ಇಲ್ಲಿ ಆಯೋಜಿಸಲಾಗಿತ್ತು.

ಈ ಕಾರ್ಯಾಗಾರದಲ್ಲಿ ವಿವಿಧ ಜಿಲ್ಲೆಗಳಿಂದ ಆಯ್ದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸ್ವಯಂ ಸೇವಾ ಸಂಸ್ಥೆಗಳ ಪ್ರತಿನಿಧಿಗಳು, ಜಿಲ್ಲಾ ಸಮಾಲೋಚಕರು ಸೇರಿದಂತೆ ನೀರು ಮತ್ತು ನೈರ್ಮಲ್ಯ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸಿದ ಸುಮಾರು ೬೦ ಕ್ಕೂ ಅಧಿಕ ಜನರು ಭಾಗವಹಿಸಿ, ತರಬೇತಿ ಕಾರ್ಯಾಗಾರವನ್ನು ಯಶಸ್ವಿಗೊಳಿಸಿದರು.



ಗ್ರಾಮ ಪಂಚಾಯಿತಿಗಳಲ್ಲಿ ನೀರು ಮತ್ತು ತ್ಯಾಜ್ಯ ನೀರು ನಿರ್ವಹಣೆ ಕುರಿತು ೨ನೇ ಅಂತರ್‌ರಾಷ್ಟ್ರೀಯ ಸಮ್ಮೇಳನ ವನ್ನು ೧೯ನೇ ಮತ್ತು ೨೦ನೇ ಫೆಬ್ರವರಿ ೨೦೨೦ ರಂದು ಎರಡು ದಿನಗಳ ಕಾಲ ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಹೈದರಾಬಾದ್‌ನಲ್ಲಿ ಆಯೋಜಿಸಲಾಗಿತ್ತು. ಸುಮಾರು ೩೦ ಅಂತರ್ ರಾಷ್ಟ್ರೀಯ ಮಟ್ಟದ ವಿಷಯ ತಜ್ಞರು ಈ ಸಮ್ಮೇಳನದಲ್ಲಿ ಭಾಗವಹಿಸಿದ್ದರು.

ಸ್ವಚ್ಛತೆಯ ಸುಸ್ಥಿರತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆಯು ಬದ್ಧವಾಗಿದ್ದು ವಿವಿಧ ರೀತಿಯ ಚಟುವಟಿಕೆಗಳನ್ನು ಆಯೋಜಿಸುತ್ತಿದೆ.